# ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳ ನೇಮಕಾತಿ

ಚಿತ್ರದುರ್ಗ: ಜಿಲ್ಲೆಯ 7 ಶಿಶು ಅಭಿವೃದ್ಧಿ ಯೋಜನೆ ಕಚೇರಿ ವ್ಯಾಪ್ತಿಯಲ್ಲಿ ಖಾಲಿ ಇರುವ 29 ಅಂಗನವಾಡಿ ಕಾರ್ಯಕರ್ತೆ ಹಾಗೂ 228 ಅಂಗನವಾಡಿ ಸಹಾಯಕಿ ಹುದ್ದೆಗಳು ಸೇರಿ ಒಟ್ಟು 257 ಹುದ್ದೆಗಳನ್ನು ಗೌರವ ಸೇವೆಯ ಆಧಾರದಲ್ಲಿ ನೇಮಕಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ದ್ವಿತಿಯ ಪಿಯುಸಿ ಹಾಗೂ ಸಹಾಯಕಿ ಹುದ್ದೆಗೆ ಎಸ್ಎಸ್ಎಲ್ ಸಿ ಉತ್ತೀರ್ಣರಾಗಿರಬೇಕು. 19 ರಿಂದ35 ವರ್ಷದೊಳಗಿನ ಸ್ಥಳೀಯ ಮಹಿಳಾ ಅಥವಾ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.ಭರಮಸಾಗರ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ 7 ಕಾರ್ಯಕರ್ತೆ, 23 ಸಹಾಯಕಿ ಸೇರಿ 30 ಹುದ್ದೆಗಳು, ಚಿತ್ರದುರ್ಗದಲ್ಲಿ 2 ಕಾರ್ಯಕರ್ತೆ, 9 ಸಹಾಯಕಿ ಸೇರಿ 11 ಹುದ್ದೆಗಳು, ಚಳ್ಳಕೆರೆಯಲ್ಲಿ 2 ಕಾರ್ಯಕತೆ, 24 ಸಹಾಯಕಿ ಸೇರಿ 26 ಹುದ್ದೆಗಳು, ಹಿರಿಯೂರಿನಲ್ಲಿ 2 ಕಾರ್ಯಕರ್ತೆ, 53 ಸಹಾಯಕಿ ಸೇರಿ 55 ಹುದ್ದೆಗಳು, ಹೊಳಲ್ಕೆರೆಯಲ್ಲಿ 4 ಕಾರ್ಯಕರ್ತೆ, 45 ಸಹಾಯಕಿ ಸೇರಿ 49 ಹುದ್ದೆಗಳು, ಹೊಸದುರ್ಗದಲ್ಲಿ 11 ಕಾರ್ಯಕರ್ತೆ, 53 ಸಹಾಯಕಿ ಸೇರಿ 64 ಹುದ್ದೆಗಳು, ಮೊಳಕಾಲ್ಮೂರು ನಲ್ಲಿ 1 ಕಾರ್ಯಕರ್ತೆ, 21 ಸಹಾಯಕಿ ಸೇರಿ 22 ಹುದ್ದೆಗಳ ನೇಮಕಕ್ಕೆ ಪ್ರಕಟಣೆ ಹೊರಡಿಸಲಾಗಿದೆ.ಸೆಪ್ಟೆಂಬರ್5 ಸಂಜೆ 5:30ರ ಒಳಗಾಗಿ ವೆಬ್‌ಸೈಟ್ https://karnemakaone.kar.inc.in/abcd/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯಕುಮಾರ್‌ತಿಳಿಸಿದ್ದಾರೆ.